# All India Radio: Bangalore
# National Bulletin In Kannada
# 08.02.2026 7.35 pm

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

08.02.2026 7.35 pm

*****************

ಮುಖ್ಯಾಂಶಗಳು

- ಪ್ರಧಾನಿ ನರೇಂದ್ರ ಮೋದಿ, ಮಲೇಷಿಯಾ ಪ್ರಧಾನಿಯೊಂದಿಗೆ ದ್ವಿಪಕ್ಷೀಯ ಮಾತುಕತೆ; ಹಲವು ಒಪ್ಪಂದಗಳ ವಿನಿಮಯ
- ಭಾರತ-ಅಮೆರಿಕಾ ಮಧ್ಯಂತರ ವ್ಯಾಪಾರ ಒಪ್ಪಂದ; ರೈತರ ಹಿತಾಸಕ್ತಿ ಸಂಪೂರ್ಣ ರಕ್ಷಣೆ – ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
- ಐಸಿಸಿ ಪುರುಷರ ಟಿ-20 ವಿಶ್ವಕಪ್ ಕ್ರಿಕೆಟ್; ಸಿ ಗುಂಪಿನ ಪಂದ್ಯದಲ್ಲಿಂದು ನೇಪಾಳ ವಿರುದ್ಧ ಇಂಗ್ಲೆಂಡ್‌ಗೆ 4 ರನ್‌ಗಳ ರೋಚಕ ಜಯ
- ಏಷ್ಯನ್ ರೈಫಲ್ ಶೂಟಿಂಗ್ ಚಾಂಪಿಯನ್‌ಶಿಪ್; 10 ಮೀಟರ್ ಏರ್ ರೈಫಲ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಭಾರತಕ್ಕೆ ಚಿನ್ನ

*******************

ಪ್ರಧಾನಿ ನರೇಂದ್ರ ಮೋದಿ ಅವರು, ಕೌಲಾಲಂಪುರದಲ್ಲಿಂದು ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ಭದ್ರತೆ, ವಿಪತ್ತು ನಿರ್ವಹಣೆ, ಸೆಮಿಕಂಡಕ್ಟರ್ ಅಭಿವೃದ್ಧಿ, ಆಡಿಯೋ-ವಿಶುವಲ್ ಸಹ-ನಿರ್ಮಾಣ, ಭ್ರಷ್ಟಾಚಾರ ನಿಗ್ರಹ, ಸೇರಿದಂತೆ ಹಲವಾರು ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಭಯೋತ್ಪಾದನೆ ನಿಗ್ರಹ, ಗುಪ್ತಚರ ಮಾಹಿತಿ ಹಂಚಿಕೆ, ಕಡಲ ಭದ್ರತೆ ಮತ್ತು ರಕ್ಷಣೆಯಲ್ಲಿ ಉಭಯ ದೇಶಗಳ ನಡುವಿನ ಸಹಕಾರವು ವಿಸ್ತರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

ಇಂಧನ, ಮೂಲಸೌಕರ್ಯ, ಉತ್ಪಾದನೆ ಮತ್ತು ಡಿಜಿಟಲ್ ಆರ್ಥಿಕತೆಯಲ್ಲಿ ಎರಡೂ ದೇಶಗಳ ಸಹಕಾರ ಬೆಳೆಯುತ್ತಿದೆ. ಕೃತಕ ಬುದ್ಧಿಮತ್ತೆ, ಅರೆವಾಹಕಗಳು, ಆರೋಗ್ಯ ಮತ್ತು ಆಹಾರ ಭದ್ರತೆಯಲ್ಲೂ ಸಹಯೋಗ ಆಳವಾಗುತ್ತಿದೆ. ಭಯೋತ್ಪಾದನೆಯ ವಿರುದ್ಧ ಭಾರತದ ನಿಲುವು ಸ್ಪಷ್ಟವಾಗಿದೆ. ಭಯೋತ್ಪಾದನೆಯ ಬಗ್ಗೆ ಯಾವುದೇ ದ್ವಿಮುಖ ಮಾನದಂಡಗಳು ಮತ್ತು ರಾಜಿ ಸಾಧ್ಯವಿಲ್ಲ ಎಂದು ಅವರು ಪ್ರತಿಪಾದಿಸಿದರು.

ಕಡಲ ನೆರೆಹೊರೆಯವರಾಗಿ ಭಾರತ ಮತ್ತು ಮಲೇಷ್ಯಾ, ವಿಶೇಷ ಬಾಂಧವ್ಯವನ್ನು ಹಂಚಿಕೊಂಡಿವೆ. ಮಲೇಷ್ಯಾದಲ್ಲಿ ತಮಿಳು ಭಾಷೆ ಸೇರಿದಂತೆ ಭಾರತದೊಂದಿಗಿನ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಸಂಬಂಧಗಳ ಕುರಿತು ಪ್ರಧಾನಿ ಒತ್ತಿ ಹೇಳಿದರು. ಭಾರತವು ಆಸಿಯಾನ್ ಒಕ್ಕೂಟದ ಕೇಂದ್ರೀಕರಣಕ್ಕೆ ಬದ್ಧವಾಗಿದೆ. ಆಸಿಯಾನ್‌ನ ಅಧ್ಯಕ್ಷತೆಯನ್ನು ವಹಿಸಲಿರುವ ಮಲೇಷ್ಯಾವನ್ನು ಪ್ರಧಾನಿ ಅಭಿನಂದಿಸಿದರು.

ಆಸಿಯಾನ್–ಭಾರತ ಸರಕು ವ್ಯಾಪಾರ ಒಪ್ಪಂದದ ಪರಿಶೀಲನೆಯನ್ನು ಆದಷ್ಟು ಶೀಘ್ರ ಪೂರ್ಣಗೊಳಿಸಲು ಉಭಯ ದೇಶಗಳು ಒಪ್ಪಿಕೊಂಡಿವೆ ಎಂದು ಅವರು ತಿಳಿಸಿದರು.

ಇಂಡೋ–ಪೆಸಿಫಿಕ್ ಪ್ರದೇಶವು ಬೆಳವಣಿಗೆಯ ಎಂಜಿನ್ ಆಗಿ ಹೊರಹೊಮ್ಮುತ್ತಿದೆ. ಭಾರತ ಮತ್ತು ಮಲೇಷ್ಯಾ ಈ ಪ್ರದೇಶದಲ್ಲಿ ಅಭಿವೃದ್ಧಿ, ಶಾಂತಿ ಮತ್ತು ಸ್ಥಿರತೆಗಾಗಿ ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

********************

ಭಾರತ–ಅಮೆರಿಕಾ ಮಧ್ಯಂತರ ವ್ಯಾಪಾರ ಒಪ್ಪಂದವು ರೈತರ ಹಿತಾಸಕ್ತಿಗಳನ್ನು ಸಂಪೂರ್ಣವಾಗಿ ರಕ್ಷಿಸುತ್ತದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ಭೋಪಾಲ್‌ನಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ವ್ಯಾಪಾರ ಒಪ್ಪಂದದ ಬಗ್ಗೆ ಕಾಂಗ್ರೆಸ್ ಪಕ್ಷದ ಟೀಕೆಯನ್ನು ತಿರಸ್ಕರಿಸಿದರು. ಈ ಒಪ್ಪಂದವು ಕೃಷಿ ಮತ್ತು ರೈತರ ಹಿತಾಸಕ್ತಿಗಳನ್ನು ಸಂಪೂರ್ಣವಾಗಿ ರಕ್ಷಿಸುತ್ತದೆ. ಪ್ರಮುಖ ಕೃಷಿ ಉತ್ಪನ್ನಗಳನ್ನು ಒಪ್ಪಂದದಿಂದ ಹೊರಗಿಡಲಾಗಿದೆ ಎಂದು ತಿಳಿಸಿದರು.

ಧ್ವನಿ: ಶಿವರಾಜ್ ಸಿಂಗ್

ವರ್ಷಗಳ ಕಾಲ ಆಳ್ವಿಕೆ ನಡೆಸಿದ ಕಾಂಗ್ರೆಸ್, ರೈತರನ್ನು ಜಾಗತಿಕ ಮಾರುಕಟ್ಟೆಗಳಿಗೆ ಸಂಪರ್ಕಿಸಲು ಅಥವಾ ಆರ್ಥಿಕ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ವಿಫಲವಾಗಿದೆ ಎಂದು ಆರೋಪಿಸಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಡಿಯಲ್ಲಿ ಭಾರತ, ವಿಶ್ವದ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗುವತ್ತ ವೇಗವಾಗಿ ಸಾಗುತ್ತಿದೆ ಎಂದ ಅವರು, ಈ ವ್ಯಾಪಾರ ಒಪ್ಪಂದದ ಕುರಿತು ವಿರೋಧ ಪಕ್ಷಗಳು ಅನಗತ್ಯ ಭಯ ಸೃಷ್ಟಿಸುತ್ತಿವೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ದೂರಿದರು.

********************

ಭಾರತ–ಅಮೆರಿಕಾ ವ್ಯಾಪಾರ ಒಪ್ಪಂದವು ವಜ್ರ ಕ್ಷೇತ್ರದಲ್ಲಿ ತೊಡಗಿರುವ 10 ಲಕ್ಷಕ್ಕೂ ಹೆಚ್ಚು ಜನರಿಗೆ ಅನೇಕ ಪ್ರಯೋಜನಗಳಾಗಲಿವೆ ಎಂದು ಮುಂಬೈನ ವಜ್ರ ಕಂಪನಿಯ ಮಾಲೀಕ ದಿನೇಶ್ ಲಖಾನಿ ಅಭಿಪ್ರಾಯಪಟ್ಟಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಸುಂಕಗಳ ಕಡಿತವು ವಜ್ರ ರಫ್ತುಗಳನ್ನು ಹೆಚ್ಚಿಸುತ್ತವೆ ಮತ್ತು ಆಭರಣ ವಲಯದಲ್ಲಿ ಹೊಸ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ. ಈ ಒಪ್ಪಂದವು ವಿಕಸಿತ ಭಾರತದ ಪ್ರಯಾಣದಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ತಿಳಿಸಿದ್ದಾರೆ.

********************

ಛತ್ತೀಸ್‌ಗಢದ ಎಡಪಂಥೀಯ ಉಗ್ರವಾದ ಪೀಡಿತ ಪ್ರದೇಶಗಳಲ್ಲಿ ಭದ್ರತಾ ವ್ಯವಸ್ಥೆಗಳು ಮತ್ತು ಅಭಿವೃದ್ಧಿ ಯೋಜನೆಗಳನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ಪರಿಶೀಲಿಸಿದರು.

ರಾಯ್‌ಪುರದಲ್ಲಿಂದು ಎರಡು ಉನ್ನತ ಮಟ್ಟದ ಸಭೆಗಳನ್ನು ಸಹ ಅವರು ನಡೆಸಿದರು. ಈ ಸಭೆಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು, ಭದ್ರತಾ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಇಂದು ಸಂಜೆ ನಡೆದ 'ಛತ್ತೀಸ್‌ಗಢ @25: ಶಿಫ್ಟಿಂಗ್ ದಿ ಲೆನ್ಸ್' ರಾಷ್ಟ್ರೀಯ ಸಮಾವೇಶದಲ್ಲಿ ಸಚಿವ ಅಮಿತ್ ಶಾ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಜಗದಲ್‌ಪುರದಲ್ಲಿ ನಾಳೆ ನಡೆಯಲಿರುವ ಬಸ್ತರ್ ಪಾಂಡಮ್ ಉತ್ಸವದ ಸಮಾರೋಪ ಸಮಾರಂಭದಲ್ಲಿ ಅವರು ಭಾಗವಹಿಸಲಿದ್ದಾರೆ.

********************

ಮುಂಬೈನ ತಾಜ್‌ಮಹಲ್ ಅರಮನೆಯಲ್ಲಿಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಸೀಶೆಲ್ಸ್ ಅಧ್ಯಕ್ಷ ಡಾ.ಪ್ಯಾಟ್ರಿಕ್ ಹರ್ಮಿನಿ ಅವರನ್ನು ಭೇಟಿಯಾಗಿ ವಿವಿಧ ವಿಷಯಗಳು ಕುರಿತು ಮಾತುಕತೆ ನಡೆಸಿದರು.

ಸಾಮಾಜಿಕ ಜಾಲತಾಣದಲ್ಲಿ ದೇವೇಂದ್ರ ಫಡ್ನವೀಸ್, ಬಂದರು ಅಭಿವೃದ್ಧಿ, ಕರಾವಳಿ ನಿರ್ವಹಣೆ ಹಾಗೂ ಮಹಾರಾಷ್ಟ್ರ ಮತ್ತು ಸೀಶೆಲ್ಸ್ ನಡುವಿನ ವರ್ಧಿತ ಸಹಯೋಗದ ನಿಟ್ಟಿನಲ್ಲಿ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ಸೀಶೆಲ್ಸ್ ವಿದೇಶಾಂಗ ಸಚಿವ ಬ್ಯಾರಿ ಫೌರ್, ಹಣಕಾಸು ಸಚಿವ ಪಿಯರೆ ಲ್ಯಾಪೋರ್ಟೆ, ಸಾರಿಗೆ ಸಚಿವ ವರೊನಿಕ್ ಲ್ಯಾಪೋರ್ಟೆ, ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಅಮಂಡಾ ಬರ್ನ್‌ಸ್ಟೈನ್ ಸೇರಿದಂತೆ ಮಹಾರಾಷ್ಟ್ರದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು ಎಂದು ತಿಳಿಸಿದ್ದಾರೆ.

ಮುಂಬೈ ಮತ್ತು ಚೆನ್ನೈ ಭೇಟಿಯ ನಂತರ ಸೀಶೆಲ್ಸ್ ಅಧ್ಯಕ್ಷರು ಇಂದು ಸಂಜೆ ನವದೆಹಲಿಗೆ ಆಗಮಿಸಿದ್ದಾರೆ.

********************

ಚೆನ್ನೈನ ಎಂ.ಎ.ಚಿದಾಂಬರಂ ಕ್ರೀಡಾಂಗಣದಲ್ಲಿ ಇಂದು ನಡೆದ ಐಸಿಸಿ ಪುರುಷರ ಟಿ–20 ವಿಶ್ವಕಪ್ 2026 ಪಂದ್ಯಾವಳಿಯ ಡಿ ಗುಂಪಿನ ನಾಲ್ಕನೇ ಪಂದ್ಯದಲ್ಲಿ ಅಫ್ಘಾನಿಸ್ತಾನದ ವಿರುದ್ಧ ನ್ಯೂಜಿಲೆಂಡ್ 5 ವಿಕೆಟ್‌ಗಳಿಂದ ಜಯ ಸಾಧಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ, ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 182 ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ನ್ಯೂಜಿಲೆಂಡ್, 17.5 ಓವರ್‌ಗಳಲ್ಲಿ ಐದು ವಿಕೆಟ್ ನಷ್ಟಕ್ಕೆ 183 ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಸಿ ಗುಂಪಿನ ಐದನೇ ಪಂದ್ಯದಲ್ಲಿ ನೇಪಾಳ ವಿರುದ್ಧ ಇಂಗ್ಲೆಂಡ್ 4 ರನ್‌ಗಳಿಂದ ರೋಚಕ ಗೆಲುವು ಸಾಧಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 184 ರನ್ ಮಾಡಿದೆ. ಗೆಲುವಿನ ಗುರಿ ಬೆನ್ನತ್ತಿದ ನೇಪಾಳ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 180 ರನ್ ಗಳಿಸಿ, ಕೊನೆಯ ಬಾಲ್ ವರೆಗೆ ಗೆಲುವಿಗಾಗಿ ಸೆಣಸಾಟ ನಡೆಸಿತು. ಆದರೆ, ಇಂಗ್ಲೆಂಡ್ ಬೌಲರ್‌ಗಳು, ನೇಪಾಳ ಬ್ಯಾಟ್ಸ್‌ಮನ್‌ಗಳನ್ನು ಕಟ್ಟಿಹಾಕಲು ಯಶಸ್ವಿಯಾದರು.

ಕೊಲಂಬೊದ ಆರ್.ಪ್ರೇಮದಾಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಬಿ ಗುಂಪಿನ ಆರನೇ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಟಾಸ್ ಗೆದ್ದ ಐರ್ಲ್ಯಾಂಡ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

********************

ನವದೆಹಲಿಯಲ್ಲಿ ನಡೆದ ಏಷ್ಯನ್ ರೈಫಲ್ ಶೂಟಿಂಗ್ ಚಾಂಪಿಯನ್‌ಶಿಪ್ 2026ರ 10 ಮೀಟರ್ ಏರ್‌ರೈಫಲ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಭಾರತದ ಅರ್ಜುನ್ ಬಬುಟಾ ಹಾಗೂ ಎಲವೆನಿಲ್ ವಲರಿವನ್ ವಿಶ್ವ ದಾಖಲೆ ನಿರ್ಮಿಸುವ ಮೂಲಕ ಚಿನ್ನದ ಪದಕ ಗೆದ್ದಿದ್ದಾರೆ.

ಫೈನಲ್‌ನಲ್ಲಿ ಈ ಜೋಡಿಯು ಒಟ್ಟಾಗಿ 505 ಅಂಕಗಳನ್ನು ಗಳಿಸುವ ಮೂಲಕ ಏಷ್ಯನ್ ಪ್ರಶಸ್ತಿಯನ್ನು ಉಳಿಸಿಕೊಂಡಿವೆ. ಕ್ರಮವಾಗಿ ಕೊರಿಯಾ ಗಣರಾಜ್ಯದ ಕಿಮ್ ವುರಿಮ್ ಮತ್ತು ಕ್ವಾನ್ ನ್ಯೂಂಜಿ ಜೋಡಿ ಹಾಗೂ ಜಪಾನ್‌ನ ನವೋಯಾ ಒಕಾಡಾ ಮತ್ತು ಮಿಸಾಕಿ ನೊಬಾಟಾ ಜೋಡಿ ಕ್ರಮವಾಗಿ ಬೆಳ್ಳಿ ಮತ್ತು ಕಂಚು ಪದಕ ವಿಜೇತರಾದರು.

********************

ತೊಗರಿಬೇಳೆ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಕರ್ನಾಟಕ ಸಂಸ್ಕರಣೆಗಾಗಿ 35 ಬೇಳೆ ಗಿರಣಿಗಳನ್ನು ಸ್ಥಾಪಿಸಬೇಕು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿಂದು ಅಂತಾರಾಷ್ಟ್ರೀಯ ವಾಣಿಜ್ಯ ಮೇಳ – ಉತ್ಪಾದನೋತ್ತರ ಕೃಷಿ, ರೈತರ ಸಬಲೀಕರಣ ಕಾರ್ಯಕ್ರಮದಲ್ಲಿ ಅವರು ಇಂದು ಪಾಲ್ಗೊಂಡು ಅವರು ಮಾತನಾಡಿದರು.

ತೆಂಗು ಉತ್ಪನ್ನವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪ್ರಧಾನಮಂತ್ರಿಯವರ ನಿರ್ದೇಶನದ ಮೇರೆಗೆ ತೆಂಗು ಅಭಿವೃದ್ಧಿಗೆ ಕಾರ್ಯಕ್ರಮ ಆರಂಭಿಸಲಾಗುವುದು. ಯೋಜನೆಯಡಿ ರೋಗ ಪೀಡಿತ ಹಳೆಯ ಮರಗಳ ಬದಲಿಸಲು ಉತ್ತೇಜಿಸಲಾಗುವುದು. ರೈತರು ಈ ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ಅವರು ಮನವಿ ಮಾಡಿದರು.

**********ಮುಕ್ತಾಯ**********